(ಈ ಹಂತದಲ್ಲಿ ಬಿ.ಜೆ.ಪಿ ಸದಸ್ಯರು ಸದನದ ಬಾವಿಯಲ್ಲಿ ಘೋಷಣೆಗಳನ್ನು ಕೂಗುತ್ತಾ ಧರಣಿಯಲ್ಲಿ ನಿರತರಾಗಿದ್ದರು)

7. ಶಾಸನ ರಚನೆ

ಅ. ವಿಧೇಯಕ ಮಂಡನೆಗೆ ಅನುಮತಿ ಕೋರಿಕೆ

(i) ಕರ್ನಾಟಕ ಧನವಿನಿಯೋಗ (ಸಂಖ್ಯೆ 2) ವಿಧೇಯಕ, 2014

ಶ್ರೀ ಸಿದ್ದರಾಮಯ್ಯ (ಮುಖ್ಯಮಂತ್ರಿ):– ಮಾನ್ಯ ಅಧ್ಯಕ್ಷರೆ, 2014ನೇ ಸಾಲಿನ ಕರ್ನಾಟಕ ಧನವಿನಿಯೋಗ (ಸಂಖ್ಯೆ 2) ವಿಧೇಯಕ, 2014 ಅನ್ನು ಮಂಡಿಸಲು ಅನುಮತಿ ಕೋರುತ್ತೇನೆ.

ಅಧ್ಯಕ್ಷರು:– ಪ್ರಸ್ತಾವನೆ ಮಂಡಿಸಲಾಯಿತು.

ಈಗ ಪ್ರಸಾವನೆಯನ್ನು ಸಭೆಯ ಮತಕ್ಕೆ ಹಾಕುತ್ತೇನೆ.

ಪ್ರಸ್ತಾವನೆ ಹೀಗಿದೆ:

2014ನೇ ಸಾಲಿನ ಕರ್ನಾಟಕ ಧನವಿನಿಯೋಗ (ಸಂಖ್ಯೆ 2) ವಿಧೇಯಕವನ್ನು ಮಂಡಿಸಲು ಸಭೆಯು ಅನುಮತಿ ನೀಡಬೇಕು

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು ಅಂಗೀಕೃತವಾಗಿದೆ.

ಮಾನ್ಯ ಮುಖ್ಯಮಂತ್ರಿಯವರು ಈಗ ದಯವಿಟ್ಟು ವಿಧೇಯಕವನ್ನು ಮಂಡಿಸಬೇಕು.